ಒಂದನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಃ ನ್ಯಾಯಾಲಯ, ಮದ್ದೂರು

ಓಎಸ್ 227/2015     ಪಿಡಬ್ಲ್ಯೂ-1

ದಿನಾಂಕಃ 15-06-2026 ರಂದು ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಪಾಟೀ ಸವಾಲುಃ ಪ್ರತಿವಾದಿಯ ಪರ ಮಾನ್ಯ ಶ್ರೀ.ವಕೀಲರಿಂದಃ-**

ನಾನು ಈಗ ಹಾಜರುಪಡಿಸಿರುವ ದಾಖಲಾತಿಗಳು ದಾವೆ ಸಲ್ಲಿಸುವ ಕಾಲಕ್ಕೆ ಸಿಕ್ಕಿರುವುದಿಲ್ಲ , ಆದ ಕಾರಣ ಈಗ ಹಾಜರುಪಡಿಸುತ್ತಿದ್ದೇನೆ. ಎಲ್ಲಾ ಆಸ್ತಿಗಳಲ್ಲಿ ಭಾಗ ಬೇಕು ಎಂದು ದಾವೆಯಲ್ಲಿ ಹೇಳಿರುತ್ತೇನೆ. ನ್ಯಾಯಾಲಯದ ಮುಂದೆ ಹಾಜರುಪಡಿಸಿರುವ ದಾಖಲಾತಿಗಳ ಮೇಲೆ ದಾವೆಯಲ್ಲಿ ಕೇಳಿಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಗಳು ನನ್ನ ತಂದೆಯ ಸ್ವಯಾರ್ಜಿತ ಆಸ್ತಿ ಎಂದರೆ ಸರಿಯಲ್ಲ, ಅದು ಪಿತ್ರಾರ್ಜಿತ ಆಸ್ತಿ ಆಗಿದೆ ಎನ್ನುತ್ತಾರೆ. ಕೂಳಿ ಅಂಗಡಿ ಮತ್ತು ಸಾರಾಯಿ ಅಂಗಡಿ ಆದಾಯದಿಂದ ಸದರಿ ಆಸ್ತಿಯನ್ನು ನನ್ನ ತಂದೆ ಖರೀದಿಸಿದ್ದರು ಎಂದರೆ ಸರಿಯಲ್ಲ. ದಾವಾ ಆಸ್ತಿಯನ್ನು ಹೊಡೆದುಕೊಳ್ಳುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಪ್ರತಿವಾದಿಗೆ ತೊಂದರೆ ಕೊಡುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ, ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಗಿದೆ.)

ಓ ಹೇ ಕೇ ಸರಿಯಾಗಿದೆಂದು ಒಪ್ಪಿರುತ್ತಾರೆ.

ಒಂದನೇ ಅಪರ ಸಿವಿಲ್ ಮತ್ತು ಜೆಎಂಎಫ್,ಸಿ,

ನ್ಯಾಯಾಧೀಶರು, ಮದ್ದೂರು.

**ಸಾಕ್ಷಿಯ ಸಹಿಃ**